# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 51 | Pages. 2 | Date: 22-01-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 51 - ಪುಟಗಳು : 2 | 22-01-2026 | ಗುರುವಾರ | Ph: 8762954248 | ದರ : ₹1


# 2028ರ ವಿಧಾನಸಭೆ ಚುನಾವಣೆಗೆ ಜ.24ಕ್ಕೆ ಕಹಳೆ

## ಜೆಡಿಎಸ್ ಸಮಾವೇಶ ಸ್ಥಳ ಪರಿಶೀಲಿಸಿದ ಕೇಂದ್ರ ಸಚಿವ ಹೆಚ್‌ಡಿಕೆ | ಕಾಂಗ್ರೆಸ್ ವಿರುದ್ಧ ವಾಗ್ದಾಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮುಂದಿನ ಸ್ಥಳೀಯ ಸಂಸ್ಥೆ ಚುನಾವಣೆ ದೃಷ್ಟಿಯಿಂದ ಹಾಸನದಲ್ಲಿ ಜ.24ರಂದು ಜೆಡಿಎಸ್ ಬೆಳ್ಳಿ ಹಬ್ಬದ ಜನತಾ ಸಮಾವೇಶ ಹಮ್ಮಿಕೊಂಡಿದ್ದು ಪಕ್ಷದ ಕಾರ್ಯಕರ್ತರು, ನಾಡಿನ ಜನತೆಗೆ ಸಂದೇಶ ರವಾನಿಸಲಾಗುವುದು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು. ಸಮಾವೇಶ ನಡೆಯುವ ನಗರ ಹೊರವಲಯದ ಬೂವನಹಳ್ಳಿ ಸಮೀಪ ಇರುವ ಬಿಜಿಎಸ್‌ಕೆ ವಸತಿ ಬಡಾವಣೆಯಲ್ಲಿ ಬುಧವಾರ ಸ್ಥಳ ಪರಿಶೀಲನೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿ, ಈ ಜಿಲ್ಲೆ ನಮ್ಮ ಪಕ್ಷಕ್ಕೆ ಕರ್ಮಭೂಮಿ. ಈ ಪವಿತ್ರ ಭೂಮಿಯಿಂದಲೇ 2028ರ ಚುನಾವಣೆ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಗೆ ಸಂಘಟನೆಗೆ ಚಾಲನೆ ನೀಡಲಾಗುವುದು ಎಂದರು.

ಜಾತ್ಯಾತೀತ ಜನತಾ ದಳದ 25ನೇ ವರ್ಷದ ಬೆಳ್ಳಿಹಬ್ಬವನ್ನು ಸಾಂಕೇತಿಕವಾಗಿ ಬೆಂಗಳೂರಿನಲ್ಲಿ ಆಚರಿಸಲಾಗಿದೆ. ಬೆಳ್ಳಿಹಬ್ಬವನ್ನು ರಾಜ್ಯದ 30 ಜಿಲ್ಲೆಯಲ್ಲಿ ಆಚರಿಸಲು ಘೋಷಣೆ ಮಾಡಲಾಗಿತ್ತು. ಅದರಂತೆ ಪ್ರಥಮ ಸಮಾವೇಶವನ್ನು ಜ.24ರಂದು ಹಾಸನದಲ್ಲಿ ನಡೆಸಲಾಗುತ್ತಿದೆ. ಪ್ರಥಮ ಸಮಾವೇಶ ಹಾಸನದಲ್ಲಿ ನಡೆದ ನಂತರ ರಾಜ್ಯದ ಬೇರೆ ಬೇರೆ ಜಿಲ್ಲೆಗ್ಗಳಲ್ಲಿ ನಡೆಸಲು ದಿನಾಂಕ ನಿಗದಿ ಮಾಡಲಾಗುವುದು ಎಂದರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಇಷ್ಟು ವರ್ಷಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಈ ಜಿಲ್ಲೆಯ ಜನರ ಸಹಕಾರ ಮಹತ್ವದ್ದಾಗಿದೆ. ಹಾಗಾಗಿ ಸಮಾವೇಶ ನಡೆಸಲು ಈ ಜಿಲ್ಲೆಯನ್ನೇ ಆಯ್ಕೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಸುಪ್ರೀಂಕೋರ್ಟ್ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ನಡೆಸುವಂತೆ ಸೂಚಿಸಿದೆ. ಸದ್ಯದಲ್ಲೇ ಗ್ರಾಮ ಪಂಚಾಯಿತಿಗಳ ಅಕಾರಾವ ಕೂಡ ಮುಕ್ತಾಯಗೊಳ್ಳುವುದರಿಂದ ಸ್ಥಳೀಯ ಸಂಸ್ಥೆಗಳ ಚುನಾವಣೆ ದೃಷ್ಟಿಯಿಂದ ಪಕ್ಷ ಸಂಘಟನೆಗೆ ಇಲ್ಲಿಂದಲೇ ಸಂದೇಶ ರವಾನಿಸಲಾಗುವುದು ಎಂದರು.

> ಕೇಂದ್ರ ಬಜೆಟ್ ವಿಚಾರವಾಗಿ ರಾಜ್ಯದ ಮುಖ್ಯಮಂತ್ರಿಗಳಾಗಲಿ, ಮಂತ್ರಿಗಳಾಗಿ ಯಾರೂ ಚರ್ಚೆ ಮಾಡಿಲ್ಲ. ನನ್ನ ಇಲಾಖೆಗೆ ಸಂಬಂಧಪಟ್ಟಂತೆ ಯಾವ ರೀತಿ ಸಮಸ್ಯೆಗಳಿಗೆ ಪರಿಹಾರ ತರಬಹುದು ಎಂಬ ಬಗ್ಗೆ ನನ್ನ ವ್ಯಾಪ್ತಿಯಲ್ಲಿ ಪ್ರಯತ್ನಪಡುತ್ತಿದ್ದೇನೆ.
>
> **- ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ**

### ಬಿಜೆಪಿ-ಜೆಡಿಎಸ್ ಮೈತ್ರಿಗೆ ಭಂಗವಿಲ್ಲ

ಜೆಡಿಎಸ್-ಬಿಜೆಪಿ ಮೈತ್ರಿಯಲ್ಲೇ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಎದುರಿಸಬೇಕೆಂಬ ಆದ್ಯತೆ ನಮ್ಮಲ್ಲಿದೆ. ಆ ನಿಟ್ಟಿನಲ್ಲಿ ಬಿಜೆಪಿ ನಾಯಕರೊಂದಿಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಪೈಪೋಟಿ ಇರುವುದರಿಂದ ಮೈತ್ರಿ ಕಷ್ಟವಾಗಬಹುದು ಎಂಬ ಆತಂಕದಲ್ಲಿ ದೇವೇಗೌಡರು ಹೇಳಿಕೆ ನೀಡಿದ್ದಾರೆ. ಆದರೆ ಈಗಿರುವ ಮುಕ್ತ ವಾತಾವರಣದಲ್ಲಿ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲೂ ಸಾಧ್ಯವಾದಷ್ಟು ಮೈತ್ರಿ ಮುಂದುವರಿಸಬೇಕೆಂಬ ಉದ್ದೇಶ ಇಟ್ಟುಕೊಂಡಿದ್ದೇವೆ ಎಂದರು.

ಈ ಬಗ್ಗೆ ಎರಡು ಪಕ್ಷದ ನಾಯಕರು ಕುಳಿತು ಸಾಧಕ-ಬಾಧಕದ ಬಗ್ಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು. ನಮ್ಮ ಮುಖ್ಯ ಗುರಿ ಇರುವುದು ಈ ಕೆಟ್ಟ ಸರ್ಕಾರವನ್ನು ತೊಲಗಿಸಬೇಕೆಂಬ ಜನರ ಭಾವನೆಯನ್ನು ಈಡೇರಿಸುವುದಾಗಿದೆ. ಈ ಸರ್ಕಾರ ತೆಗೆಯಲು ಎರಡು ಪಕ್ಷಗಳು ಒಟ್ಟಾಗಿ ನಡೆದುಕೊಳ್ಳಬೇಕಿದೆ. ಮೈತ್ರಿಗೆ ಜೆಡಿಎಸ್ ಪಕ್ಷದಿಂದ ಯಾವುದೇ ಲೋಪವಾಗಬಾರದು ಎಂಬ ಉದ್ದೇಶವನ್ನು ಇಟ್ಟುಕೊಂಡಿದ್ದೇವೆ ಎಂದರು.

2006-07ರಲ್ಲಿ ಮಾಡದ ತಪ್ಪನ್ನು ನನ್ನ ಮೈ ಮೇಲೆ ಹಾಕಿಕೊಳ್ಳಬೇಕಾಯಿತು. ಹಿಂದೆ ಆದ ಅನುಭವಗಳಿಂದ ಹೇಳುವುದಾದರೆ, ಈಗ ನಮ್ಮ ಪಕ್ಷದಿಂದ ಯಾವುದೇ ತಪ್ಪು ಹುಡುಕಬಾರದು ಆ ರೀತಿ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಜಿಬಿಎ ಚುನಾವಣೆಯಲ್ಲಿ ಇವಿಎಂ ಬದಲಾಗಿ ಬ್ಯಾಲೆಟ್ ಪೇಪರ್ ಬಳಕೆ ವಿಚಾರ ಸಂಬಂಧ ಪ್ರತಿಕ್ರಿಯಿಸಿ, ನಮ್ಮ ಪಕ್ಷ ಇದೂವರೆಗೂ ಇವಿಎಂ ಬಗ್ಗೆ ಚರ್ಚೆ ಮಾಡಿಲ್ಲ. ಬ್ಯಾಲೆಟ್ ಪೇಪರ್ ಬಗ್ಗೆನೂ ಚರ್ಚೆ ಮಾಡಿಲ್ಲ. ಚರ್ಚೆ ಮಾಡುತ್ತಿರುವವರು ಯೋಚನೆ ಮಾಡಬೇಕು. ಕಾಂಗ್ರೆಸ್‌ನವರು ಇವಿಎಂ ಬಗ್ಗೆ ಚರ್ಚೆ ಮಾಡುತ್ತಾರೆ.

135 ಸೀಟ್ ಗೆದ್ದಾಗ ಇವಿಎಂ ಮೂಲಕ ಗೆದ್ದರೋ? ಬ್ಯಾಲೆಟ್ ಪೇಪರ್ ಬಳಸಿದ್ದರೋ? ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನಿಸುತ್ತೇನೆ ಎಂದರು.

ಈಗಿನ ಕಾಂಗ್ರೆಸ್ ಸರ್ಕಾರ ಸಹಕಾರ ಕ್ಷೇತ್ರಗಳ ಚುನಾವಣೆಗಳಲ್ಲಿ ಬೆಳಗ್ಗೆ ಮತದಾನ ಮಾಡಲು ಹೋಗುವವರ ಪವರ್ ಅನ್ನು ಮಧ್ಯರಾತ್ರಿ ಕಿತ್ತುಕೊಳ್ಳುತ್ತಿದೆ. ಉದಾಹರಣೆ ಬೋಜೇಗೌಡರೇ ಇದ್ದಾರೆ ಎಂದರು.

ಮಾಜಿ ಸಚಿವರಾದ ಎಚ್.ಡಿ.ರೇವಣ್ಣ, ಎಚ್.ಕೆ.ಕುಮಾರಸ್ವಾಮಿ, ಸಾ.ರಾ.ಮಹೇಶ್, ಶಾಸಕ ಎಚ್.ಪಿ.ಸ್ವರೂಪ್, ವಿಧಾನ ಪರಿಷತ್ ಸದಸ್ಯ ಬೋಜೇಗೌಡ ಇದ್ದರು.

### ವಾಸ್ತು ಪಾಲಿಸಿದ ರೇವಣ್ಣ

ಎಚ್.ಡಿ.ಕುಮಾರಸ್ವಾಮಿ ಅವರನ್ನು ಸಮಾವೇಶ ಸ್ಥಳಕ್ಕೆ ಎಚ್.ಡಿ.ರೇವಣ್ಣ ಮುಹೂರ್ತ ನೋಡಿ, ವಾಸ್ತು ಪ್ರಕಾರ ಕರೆದುಕೊಂಡು ಬಂದರು. ಇನ್ನೇನು ಕಾರಿನಿಂದ ಇಳಿಯಬೇಕು ಎನ್ನುವಷ್ಟರಲ್ಲಿ ಕಾರಿನಿಂದ ಇಳಿಯದಂತೆ ಹೇಳಿ ಮುಂದಕ್ಕೆ ಹೋಗುವಂತೆ ಕಾರು ಚಾಲಕನಿಗೆ ಎಚ್.ಡಿ.ರೇವಣ್ಣ ಹೇಳಿದರು.

ಉತ್ತರ ದಿಕ್ಕಿಗೆ ಹೋಗಿ ಈಶಾನ್ಯ ಮೂಲೆಯಿಂದ ಬಂದು ಪೂರ್ವ ದಿಕ್ಕಿಗೆ ಕಾರು ನಿಂತ ನಂತರ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಕೆಳಗಿಳಿಯುವಂತೆ ಸೂಚಿಸಿದರು. ಎಚ್‌ಡಿಕೆ ಜತೆ ಕಾರಿನಲ್ಲೇ ಎಚ್.ಡಿ.ರೇವಣ್ಣ, ಶಾಸಕ ಶಾಸಕ ಎಚ್.ಪಿ.ಸ್ವರೂಪ್, ಎಂಎಲ್‌ಸಿ ಬೋಜೇಗೌಡ ಆಗಮಿಸಿದರು.

### ಅಭಿವೃದ್ಧಿಗೆ ರಾಜ್ಯದ ಅಸಹಕಾರ

ಕೇಂದ್ರ ಸರ್ಕಾರದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಭೂಸ್ವಾಧೀನ ಮಾಡದೆ ಕಾಮಗಾರಿಗಳನ್ನು ಸ್ಥಗಿತಗೊಳಿಸಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದರು.

ರಾಜ್ಯ ಸರ್ಕಾರದ ಬೇಜವಾಬ್ದಾಯಿಂದ ಯೋಜನೆಗಳು ಸ್ಥಗಿತವಾಗುತ್ತಿವೆ. ಕೇಂದ್ರ ಸರ್ಕಾರದ ಎಲ್ಲ ಯೋಜನೆಗಳು ಸ್ಥಗಿತಗೊಂಡಿದೆ. ಕೇಂದ್ರ ಆರ್ಥಿಕ ಸಚಿವರಾದ ಹೆಣ್ಣುಮಗಳಿಗೆ ಮುಖ್ಯಮಂತ್ರಿಗಳು ಏಕವಚನದಲ್ಲಿ ಮಾತನಾಡುತ್ತಾರೆ. ಇಂತಹ ಪದ ಬಳಕೆ, ನಡವಳಿಕೆಗಳಿಂದ ಕೇಂದ್ರದಿಂದ ಹೇಗೆ ಸಹಾಯ ಪಡೆಯುತ್ತಾರೆ? ಪದೇ ಪದೆ ನಡವಳಿಕೆ ಬದಲಾಯಿಸಿಕೊಳ್ಳಿ ಎಂದು ಹೇಳಿದ್ದೇನೆ ಎಂದು ಜರಿದರು.

ಪೊಲೀಸ್ ಅಧಿಕಾರಿ ರಾಮಚಂದ್ರರಾವ್ ವಿಡಿಯೋ ಪ್ರಕರಣ ಬೆಳಕಿಗೆ ಬಂದ ಕೂಡಲೇ ಅಮಾನತು ಮಾಡಬೇಕಿತ್ತು. ಅಧಿಕಾರಿಗಳು, ಭ್ರಷ್ಟಾಚಾರದ ಬಗ್ಗೆ ಚರ್ಚೆ ಮಾಡದ ರೀತಿ ವಾತಾವರಣ ನಿರ್ಮಾಣ ಮಾಡಿಕೊಂಡಿದ್ದಾರೆ. ಭ್ರಷ್ಟ ಅಕಾರಿಗಳಿಗೆ ಈ ಸರ್ಕಾರದಲ್ಲಿ ಸಿಗುವಷ್ಟು ರಕ್ಷಣೆ ಯಾವ ಸರ್ಕಾರದಲ್ಲೂ ಸಿಗುತ್ತಿಲ್ಲ. 2016-2017ರಲ್ಲಿ ಬಿಳಿಕೆರೆ ಬಳಿ ಚಿನ್ನದ ವ್ಯಾಪಾರಿ ಬಸ್‌ನಲ್ಲಿ ಮೂರು ಕೋಟಿ ಹಣ ರೂ. ತೆಗೆದುಕೊಂಡು ಬರಬೇಕಾದರೆ ಕಳ್ಳತನ ಮಾಡಿಸಿದರು. 25 ಲಕ್ಷ ರೂ. ಲಂಚದ ಹಣವನ್ನು ಅಬಕಾರಿ ಡಿಸಿ ಸೇರಿ ಇಬ್ಬರು ಅಧಿಕಾರಿಗಳು ತೆಗೆದುಕೊಂಡಿದ್ದಾರೆ. ಅವರನ್ನು ಲೋಕಾಯುಕ್ತ ಅಧಿಕಾರಿಗಳು ಹಿಡಿದಿದ್ದಾರೆ. ಇದಕ್ಕಿಂತ ದಾಖಲೆ ಏನು ಬೇಕು ಸರ್ಕಾರದ ಕರ್ಮಕಾಂಡ ಹೇಳಲು ಎಂದು ಕುಟುಕಿದರು.



---

## ನಿಸರ್ಗ ಡೇರಿ ಫಾರಂ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪಂಜಾಬ್‌ನಿಂದ ಗರ್ಭಧರಿಸಿದ ಹಸುಗಳನ್ನು ಸಾಗಣೆ ಮಾಡಿ ರೈತರಿಗೆ ಮಾರಾಟ ಮಾಡುತ್ತಿರುವ ನಿಸರ್ಗ ಡೇರಿ ಫಾರಂ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕೆಆರ್ ಎಸ್ ಪಕ್ಷದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಲಾಯಿತು.

ಕೆಆರ್‌ಎಸ್ ಪಕ್ಷದ ಜಿಲ್ಲಾ ಮುಖಂಡ ವಿ.ರಮೇಶ್ ಮಾತನಾಡಿ, ನಿಸರ್ಗ ಡೇರಿ ಫಾರಂ ಸುಮಾರು ನಾಲ್ಕು ಸಾವಿರ ಕಿ.ಮೀ. ದೂರದಿಂದ ಗರ್ಭಧರಿಸಿದ ಹಸುಗಳನ್ನು ಲಾರಿಗಳ ಮೂಲಕ ಸಾಗಣೆ ಮಾಡಿಕೊಂಡು ಬರುತ್ತಿದೆ ಎಂದು ಆರೋಪಿಸಿದರು.

ಈ ಡೇರಿ ಫಾರಂ ರಾಜ್ಯದಲ್ಲಿ 20ಕ್ಕೂ ಹೆಚ್ಚು ಶಾಖೆಗಳನ್ನು ತೆರೆದು ರೈತರಿಗೆ ಹಸುಗಳನ್ನು ಮಾರಾಟ ಮಾಡುತ್ತಿದೆ. ಆದರೆ ದೂರದ ಪ್ರಯಾಣ, ಅಸಮರ್ಪಕ ಸಾಗಣೆ ಹಾಗೂ ಸೂಕ್ತ ಆರೈಕೆ ಇಲ್ಲದ ಕಾರಣದಿಂದಾಗಿ ಅನೇಕ ಹಸುಗಳು ಸಾವನ್ನಪ್ಪಿದ್ದು, ಕೆಲವು ಹಸುಗಳಲ್ಲಿ ಗರ್ಭಪಾತ ಹಾಗೂ ಗಂಭೀರ ಅನಾರೋಗ್ಯ ಸಮಸ್ಯೆಗಳು ಕಾಣಿಸಿಕೊಂಡಿವೆ ಎಂದು ಆರೋಪಿಸಿದರು.

ಇದು ಕೇವಲ ಪ್ರಾಣಿಗಳ ಮೇಲಿನ ಕ್ರೂರತೆ ಮಾತ್ರವಲ್ಲದೆ, ರೈತರ ಜೀವನಕ್ಕೂ ಹೊಡೆತ ನೀಡುತ್ತಿದೆ. ಈ ಕುರಿತು ಜಿಲ್ಲಾಡಳಿತಕ್ಕೆ ಅನೇಕ ಬಾರಿ ದೂರು ಸಲ್ಲಿಸಿದ್ದರೂ ಇದುವರೆಗೂ ಯಾವುದೇ ಪ್ರಯೋಜನವಾಗಿಲ್ಲ ಎಂದರು.

ತಕ್ಷಣವೇ ನಿಸರ್ಗ ಡೇರಿ ಫಾರಂ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು, ಪಶು ಸಾಗಣೆ ನಿಯಮಗಳನ್ನು ಉಲ್ಲಂಘಿಸಿರುವವರ ಮೇಲೆ ಕಠಿಣ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕೆಆರ್‌ಎಸ್ ಪಕ್ಷದ ರವಿನಂದನ್, ಮಧು, ನಿರಂಜನ್, ಜಗದೀಶ್, ಪ್ರದೀಪ್ ಇತರರು ಹಾಜರಿದ್ದರು. ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದರು.

---

## ಮಾದಕ ಪದಾರ್ಥಗಳಿಂದ ಯುವಕರನ್ನು ದೂರವಿಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಎಳೆಯ ವಯಸ್ಸಿನವರು ಕುತೂಹಲಕ್ಕಾಗಿ ಮಾದಕ ವಸ್ತುಗಳನ್ನು ಸೇವಿಸಿ ವ್ಯಸನಿಗಳಾಗುತ್ತಿರುವುದು ಆತಂಕದ ಸಂಗತಿ. ಅವರನ್ನು ಸರಿದಾರಿಗೆ ಗುರುತರ ಜವಾಬ್ದಾರಿ ಎಂದು ಪೋಷಕರು ಹಾಗೂ ಶಿಕ್ಷಕರ ಮೇಲಿದೆ ಎಂದು ತಾಲೂಕು ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಕುಸುಮಾ ಹೇಳಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಬುಧವಾರ ಟೈಮ್ಸ್ ಪದವಿ ಪೂರ್ವ ಕಾಲೇಜು ವತಿಯಿಂದ ಆಯೋಜಿಸಿದ್ದ ಕಾನೂನು ಅರಿವು, ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಹಾಗೂ ವಿವಿಧ ಕ್ಷೇತ್ರದ ಸಾಧಕರಿಗೆ 2026ನೇ ಸಾಲಿನ ಟೈಮ್ಸ್ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿ, ಮಾದಕ ಪದಾರ್ಥಗಳ ಸೇವನೆಯಿಂದ ಮಾನಸಿಕವಾಗಿ ಸ್ಥಿಮಿತ ಕಳೆದುಕೊಳ್ಳಬೇಕಾಗುತ್ತದೆ. ಅದರ ವಿರುದ್ಧ ಎಚ್ಚರದಿಂದಿರುವಂತೆ ಯುವಕರಲ್ಲಿ ಜಾಗೃತಿ ಮೂಡಿಸುವುದು ಮುಖ್ಯವಾಗಿದೆ. ಮಾದಕ ವಸ್ತು ಸೇವನೆ, ಸಮಾಜದಲ್ಲಿ ಶಾಂತಿ ಕದಡಿ ಅಶಾಂತಿಗೆ ದಾರಿ ಮಾಡಿಕೊಡುತ್ತದೆ. ಹಾಗಾಗಿ ಯುವಕರು ಅದರಿಂದ ದೂರವಿರಬೇಕು. ಈ ಮಾದಕ ದುಶ್ಚಟಕ್ಕೆ ಬಲಿಯಾದವರನ್ನು ಸರಿದಾರಿಗೆ ತರುವ ಕೆಲಸದಲ್ಲಿ ತೊಡಗಬೇಕು ಎಂದರು.

ಹದಿಹರೆಯದಲ್ಲಿ ಡ್ರಗ್ಸ್ ಸೇವನೆಯಿಂದ ದೈಹಿಕ ಹಾಗು ಮಾನಸಿಕವಾಗಿ ಅನೇಕ ಬದಲಾವಣೆ ಆಗುತ್ತವೆ. ಅವು ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ. ಪಾಲಕರು ಕಷ್ಟ ಕಾರ್ಪಣ್ಯಗಳ ನಡುವೆಯೂ ಮಕ್ಕಳ ಉತ್ತಮ ಭವಿಷ್ಯಕ್ಕೆ ಹಂಬಲಿಸುತ್ತಾರೆ. ವ್ಯಸನಮುಕ್ತರಾಗಿ ಉತ್ತಮ ವಿದ್ಯಾಭ್ಯಾಸ ಮಾಡುವ ಮೂಲಕ ಭವಿಷ್ಯದ ಜೊತೆಗೆ ಪಾಲಕರ ಕನಸನ್ನು ನನಸಾಗಿಸಬೇಕೆಂದು ಕಿವಿಮಾತು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಶಿಕ್ಷಣ ವ್ಯಕ್ತಿಯ ಭವಿಷ್ಯವನ್ನು ರೂಪಿಸುವುದರಿಂದ ಪ್ರಾಮುಖ್ಯತೆ ಕೊಡಬೇಕು. ಕಷ್ಟದ ಬದುಕಿನ ನಡುವೆಯೂ ಶಿಕ್ಷಣ ಪಡೆದು ಅಪ್ರತಿಮ ಸಾಧನೆ ಮಾಡಿ, ದೇಶದ ಭವಿಷ್ಯವನ್ನು ರೂಪಿಸಿದ ಗಣ್ಯರನ್ನು ಮಾದರಿಯಾಗಿಟ್ಟುಕೊಂಡು ಮಕ್ಕಳು ಶೈಕ್ಷಣಿಕವಾಗಿ ಸಾಧನೆ ಮಾಡಿ, ಶಿಕ್ಷಣ ಕಲಿಸಿದ ಗುರುವಿಗೆ ಹಾಗೂ ಪಾಲಕರಿಗೆ ಹೆಸರು ತರಬೇಕೆಂದರು.

ಯುವ ಸಮುದಾಯ ಅತಿಯಾದ ಮೊಬೈಲ್ ಬಳಕೆಗೆ ಬಲಿಯಾಗಿ ಭವಿಷ್ಯದ ಬದುಕನ್ನು ಕಳೆದುಕೊಳ್ಳುತ್ತಿದ್ದಾರೆ. ಮೊಬೈಲ್ ಬಳಕೆಯಿಂದ ಮಾನಸಿಕ ಖಿನ್ನತೆ ಹೆಚ್ಚುತ್ತಿರುವುದರಿಂದ ಮಕ್ಕಳು ಕೂಡ ಮೊಬೈಲ್ ಬಳಕೆ ಕ್ರಮೇಣವಾಗಿ ಕೈ ಬಿಡಬೇಕು ಕಿವಿಮಾತು ಹೇಳಿದರು.

ಟೈಮ್ಸ್ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ.ಗಂಗಾಧರ್ ಮಾತನಾಡಿ, ಇಂದಿನ ವಿದ್ಯಾರ್ಥಿಗಳಿಗೆ ಮೊಬೈಲ್ ಎಲ್ಲವೂ ಆಗಿದೆ. ಸೋಷಿಯಲ್ ಮೀಡಿಯಾದಲ್ಲಿ ಪೋಟೊ ಹಾಕದಿದ್ದರೆ ನಿದ್ರೆ ಬಾರದ ಸ್ಥಿತಿ ಇದೆ. ಸಣ್ಣ ಸಣ್ಣ ಆಸೆ, ಆಮಿಷಗಳಿಗೆ ಬಲಿಯಾಗುವುದನ್ನು ಬಿಡಬೇಕು. ಓದುವ ಸಮಯದಲ್ಲಿ ಕಷ್ಟಪಟ್ಟು ಓದಿ, ಓದು ಮುಗಿದ ಮೇಲೆ ನಿಮ್ಮೊಂದಿಗೆ ನಿಮ್ಮ ಸಾಧನೆಗಳನ್ನು ಸಾಮಾಜಿಕ ಜಾಲತಾಣದಲ್ಲಿ ಬಿಂಬಿಸಿ ಅದು ಮತ್ತೊಬ್ಬರಿಗೆ ಪ್ರೇರಣೆಯಾಗಬಹುದೆಂದರು. ನಮ್ಮ ಕೆಲಸ, ಸಾಧನೆಗಳು ಮಾತಾಡುವಂತಾಗಬೇಕು. ದ್ವಿತೀಯ ಪಿಯುಸಿ ಮುಗಿಸುವ ಹಂತದಲ್ಲಿರುವ ನೀವುಗಳು ದೇಶ, ಕುಟುಂಬ, ಸಮಾಜದ ಒಳಿತಿಗೆ ಕೆಲಸ ಮಾಡಿ ಸಮಾಜದ ಆಸ್ತಿಗಳಾಗಿ ಎಂದರು. ಹೆಚ್.ಡಿ.ಕೋಟೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹನುಮಂತರಾವ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯ ಶಿಕ್ಷಕ ಈ.ಈಶ್ವರನ್, ಅನಾಥ ಶವಗಳಿಗೆ ಮುಕ್ತಿ ದೊರಕಿಸುವ ಸಮಾಜ ಸೇವಕ ಸಿ.ಎಲ್.ದಿನೇಶ್, ಪ್ರಸೂತಿ ತಜ್ಞೆ ಡಾ. ಕೆ.ಆರ್. ಶೋಭಾರಾಣಿ, ಕ್ರೀಡಾ ಕ್ಷೇತ್ರದಲ್ಲಿ ಅಂತರಾಷ್ಟ್ರೀಯ ಅಥ್ಲೆಟಿಕ್ ಪ್ರಕಾಶ್ ಬರಾಳು ಅವರಿಗೆ ಟೈಮ್ಸ್ ಪುರಸ್ಕಾರ ನೀಡಿ ಗೌರವಿಸಲಾಯಿತು. ಪ್ರಾಂಶುಪಾಲ ಎ.ಸಿ.ಸುನಿಲ್ ಕುಮಾರ್, ಶಿಕ್ಷಣ ಸಂಯೋಜಕ ಶ್ರೀಕಂಠ, ಆಡಳಿತಾಧಿಕಾರಿ ಸಂಜಯ್ ಹಾಗೂ ಇತರರಿದ್ದರು.

---

## ಜಿಲ್ಲಾದ್ಯಂತ ಶಿವಕುಮಾರ ಸ್ವಾಮೀಜಿ ಪುಣ್ಯಸ್ಮರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರ ಸೇರಿ ಜಿಲ್ಲಾದ್ಯಂತ ಬುಧವಾರ ತ್ರಿವಿಧ ದಾಸೋಹಿ, ಕಾಯಕ ಯೋಗಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರ 7ನೇ ಪುಣ್ಯ ಸ್ಮರಣೆ ಹಮ್ಮಿಕೊಳ್ಳಲಾಗಿತ್ತು.

ನಗರದ ಬಸವೇಶ್ವರ ದೇವಸ್ಥಾನ ಆವರಣದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಯುವ ಘಟಕದಿಂದ ಏರ್ಪಡಿಸಿದ್ದ ಆರೋಗ್ಯ ಉಚಿತ ತಪಾಸಣೆ ಶಿಬಿರ, ಅನ್ನಸಂತರ್ಪಣೆಗೆ ಚಾಲನೆ ನೀಡಿ ಮಾತನಾಡಿದ ಜವೇನಹಳ್ಳಿ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ, ನಡೆದಾಡುವ ದೇವರು ಎಂದು ಖ್ಯಾತರಾಗಿದ್ದ ತ್ರಿವಿಧ ದಾಸೋಹಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗಬೇಕೆಂದರು. ಸಿದ್ದಗಂಗಾ ಶ್ರೀಗಳು ತ್ರಿವಿಧ ದಾಸೋಹದ ಜೀವಂತ ರೂಪವಾಗಿದ್ದರು. ಅನ್ನ ದಾಸೋಹದ ಮೂಲಕ ಜಾತಿ, ಧರ್ಮ ಭೇದವಿಲ್ಲದೆ ಮಠಕ್ಕೆ ಬಂದ ಪ್ರತಿಯೊಬ್ಬರಿಗೂ ಉಚಿತ ಭೋಜನದ ವ್ಯವಸ್ಥೆ, ಅಕ್ಷರ ದಾಸೋಹದ ಮೂಲಕ ಪ್ರಾಥಮಿಕ ಶಿಕ್ಷಣದಿಂದ ವೃತ್ತಿಪರ ಶಿಕ್ಷಣದವರೆಗೆ ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಉಚಿತ ವಿದ್ಯಾಭ್ಯಾಸ, ಜ್ಞಾನ ದಾಸೋಹದ ಮೂಲಕ ಆಧ್ಯಾತ್ಮಿಕ ಹಾಗು ಲೌಕಿಕ ಜ್ಞಾನವನ್ನು ಸಮಾಜಕ್ಕೆ ನೀಡಿದ್ದಾರೆ ಎಂದರು. ಜ. 21ರಂದು ಆಚರಿಸುವ ದಾಸೋಹ ದಿನವು ವಚನ ಸಾಹಿತ್ಯದಲ್ಲಿನ ದಾಸೋಹ ತತ್ವದ ಮಹತ್ವ ಸಾರುತ್ತದೆ. ಸಾಮಾಜಿಕ ಸಮಾನತೆ, ಕಾಯಕದ ಗೌರವ ಹಾಗು ನಿಸ್ವಾರ್ಥ ಸೇವೆಯ ಸಂದೇಶವನ್ನು ಸಮಾಜಕ್ಕೆ ತಲುಪಿಸುತ್ತದೆ ಎಂದರು. ಕಾಂಗ್ರೆಸ್ ಮುಖಂಡ ಗ್ರಾನೈಟ್ ರಾಜಶೇಖರ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಯುವ ಘಟಕದ ಜಿಲ್ಲಾಧ್ಯಕ್ಷ ಅವಿನಾಶ್, ಜೆಸಿಬಿ ಚಂದ್ರಶೇಖರ್, ಶರತ್ ಭೂಷಣ್, ಮನೋಜ್ ಶರತ್, ಅಡಗೂರು ಬಸವರಾಜು, ಅಜಿತ್ ಆಲೂರು, ವಿಕ್ರಂ, ಮಮತಾ ಪಟೇಲ್, ಗೀತಾ, ಧನಲಕ್ಷ್ಮಿ, ಬಿ.ಆರ್. ವಸಂತಕುಮಾರ್, ಮಲ್ಲಿಕಾರ್ಜುನ್, ಕೀರ್ತಿಕುಮಾರ್ ಮತ್ತಿತರರಿದ್ದರು.

### ಸಂಸದ ಶ್ರೇಯಸ್ ಪಟೇಲ್ ಭಾಗಿ

ಆರ್.ಸಿ. ರಸ್ತೆ ವೃತ್ತದಲ್ಲಿ ಆಟೋ ಚಾಲಕರು ಮತ್ತು ಮಾಲೀಕರ ಸಂಘದಿಂದ ಹಮ್ಮಿಕೊಂಡಿದ ಆರೋಗ್ಯ ಉಚಿತ ತಪಾಸಣಾ ಶಿಬಿರ, ರಕ್ತದಾನ ಶಿಬಿರ ಹಾಗೂ ಕಣ್ಣಿನ ಉಚಿತ ತಪಾಸಣೆ ಶಿಬಿರದಲ್ಲಿ ಸಂಸದ ಶ್ರೇಯಸ್ ಪಟೇಲ್ ಭಾಗವಹಿಸಿದರು.

ನಿಜ ಕಾಯಕಯೋಗಿಯ ಪುಣ್ಯ ಸ್ಮರಣೆಯನ್ನು ಈ ರೀತಿ ಆಚರಿಸಿದ್ದು ಅರ್ಥಪೂರ್ಣ ಮಾತ್ರವಲ್ಲದೆ ಭವಿಷ್ಯದ ಪೀಳಿಗೆಗೆ ಪ್ರೇರಣೆಯಾಗಿದೆ ಎಂದು ಅವರು ಹೇಳಿದರು.

---

## ಕಾಡಾನೆ ಹಾವಳಿ ಪೀಡಿತ ಪ್ರದೇಶಕ್ಕೆ ಅನುದಾನ ಹೆಚ್ಚಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಸೆಸ್ಕ್ ಶಾಖಾ ಕಚೇರಿ ಯಸಳೂರಿನಲ್ಲಿ ನಿರ್ಮಾಣವಾಗುವುದರಿಂದ ಈ ಭಾಗದ ಗ್ರಾಮಸ್ಥರು ಸಣ್ಣಪುಟ್ಟ ಕೆಲಸಗಳಿಗೆ ಅಲೆದಾಡುವುದು ತಪ್ಪುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಯಸಳೂರು ಗ್ರಾಮದಲ್ಲಿ ನೂತನ ಸೆಸ್ಕ್ ಕಚೇರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಯಸಳೂರು ಗ್ರಾಮದಲ್ಲಿ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಸೆಸ್ಕ್ ಶಾಖಾ ಕಚೇರಿಯನ್ನು ನಿರ್ಮಾಣ ಮಾಡಲಾಗುತ್ತಿದೆ. ಈ ಭಾಗದಲ್ಲಿ ಕಾಡಾನೆಗಳ ಹಾವಳಿ ಮಿತಿ ಮೀರಿದ್ದು ಹಲವಡೆ ಕಾಡಾನೆಗಳು ವಿದ್ಯುತ್ ಕಂಬಗಳನ್ನು ಬೀಳಿಸಿರುವ ಉದಾಹರಣೆಗಳಿದೆ. ಕಾಡಾನೆ ಹಾವಳಿ ಪ್ರದೇಶಗಳಲ್ಲಿ ಜನ ಸದಾ ಆತಂಕದಲ್ಲಿ ಸಂಚರಿಬೇಕಾಗಿದೆ. ಕಾಡಾನೆ ಹಾವಳಿ ಪ್ರದೇಶಗಳಲ್ಲಿ ಸಂಜೆಯ ನಂತರ ಬೆಳಿಗ್ಗೆವರೆಗೆ ಸಂಪೂರ್ಣವಾಗಿ ಬೀದಿ ದೀಪಗಳು ಇರುವಂತೆ ನೋಡಿಕೊಳ್ಳಬೇಕಾಗಿದೆ. ಹೀಗಾಗಿ ಸರ್ಕಾರ ಗಮನವರಿಸಿ ಕಾಡಾನೆ ಹಾವಳಿ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಾಮಗಾರಿಗಳಿಗಾಗಿ ವಿಶೇಷ ಅನುದಾನ ನೀಡಬೇಕು ಎಂದು ಆಗ್ರಹಿಸಿದರು.

ಕನ್ನಡ ಪೋಸ್ಟ್



# ಪ್ರಜ್ಞಾವಂತ ವ್ಯಕ್ತಿ ನಿರ್ಮಾಣವೇ ಆರ್‌ಎಸ್‌ಎಸ್ ಗುರಿ

## ಸಾಮಾಜಿಕ ಚಿಂತಕ ಶ್ರೀಕಾಂತ್ ಶೆಟ್ಟಿ | ಅರೇಹಳ್ಳಿಯಲ್ಲಿ ಸಂಘದ ಶತಾಬ್ದಿ ಸಮ್ಮೇಳನ

ಅರೇಹಳ್ಳಿ: ಸ್ವಯಂ ಸೇವಕ ಸಂಘ ಏನು ಮಾಡುತ್ತದೆ, ಅದರ ಉದ್ದೇಶವೇನು ಎಂದು ಹಲವರು ಆಗಾಗ ಪ್ರಶ್ನಿಸುತ್ತಾರೆ. ಆದರೆ ಸಂಘ ಏನನ್ನು ಮಾಡುವುದಿಲ್ಲ ಬದಲಾಗಿ ಸುಭಿಕ್ಷ ರಾಷ್ಟ್ರ ನಿರ್ಮಾಣಕ್ಕಾಗಿ ಅಗತ್ಯ ಶಿಕ್ಷಣ ನೀಡುವುದರೊಂದಿಗೆ ರಾಷ್ಟ್ರಪ್ರೇಮಿ ಪ್ರಜ್ಞಾವಂತ ವ್ಯಕ್ತಿಯನ್ನು ನಿರ್ಮಾಣ ಮಾಡುತ್ತದೆ ಎಂದು ಆರ್ ಎಸ್‌ಎಸ್ ಮುಖಂಡ ಶ್ರೀಕಾಂತ್ ಶೆಟ್ಟಿ ಹೇಳಿದರು.



ಬೇಲೂರು ತಾಲೂಕಿನ ಅರೇಹಳ್ಳಿ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಹಿಂದು ಸಮಾಜೋತ್ಸವ ಆಯೋಜನ ಸಮಿತಿ ವತಿಯಿಂದ ಬೃಹತ್ ಹಿಂದು ಸಮಾಜೋತ್ಸವ ಧಾರ್ಮಿಕ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿ, ಅವರು ಸಂಘದ ಅಡಿಯಲ್ಲಿ ತಯಾರಾಗುವ ವ್ಯಕ್ತಿಗಳು ಸ್ವಾರ್ಥತೆ ಮರೆತು ನಿಸ್ವಾರ್ಥ ಮನೋಭಾವ ಹೊಂದುತ್ತಾರೆ. ಸಮಾಜಕ್ಕಾಗಿ ಬದುಕಬೇಕೆಂಬ ಮನಸ್ಥಿತಿ ಅವರದಾಗಿರುತ್ತದೆ. ದೇಶದ ಆಪತ್ತಿನ ಕಾಲದಲ್ಲಿ ನೆರವಾಗುತ್ತಾರೆ. ಜಗತ್ತಿನ ಅತ್ಯಂತ ದೊಡ್ಡ ಸ್ವಯಂ ಸೇವಾ ಸಂಘಟನೆ ಎಂದರೆ ಅದು ರಾಷ್ಟ್ರೀಯ ಸ್ವಯಂ ಸೇವಾ ಸಂಘ, ಜಾಗತಿಕ ವೇದಿಕೆಯಲ್ಲಿ ವಿಶ್ವಗುರು ಎನಿಸಿಕೊಂಡ ದೇಶದ ಅಪ್ರತಿಮ ನಾಯಕ ಪ್ರಧಾನಿ ನರೇಂದ್ರ ಮೋದಿಯವರು ಸಹ ಈ ಸಂಘದ ಸ್ವಯಂ ಸೇವಕರು ಎಂದರು.

ಪಟ್ಟಣದ ಶ್ರೀ ಗಣಪತಿ ದೇವಾಲಯದಿಂದ ಪ್ರಾರಂಭವಾದ ಶೋಭಾಯಾತ್ರೆಯಲ್ಲಿ ಪೂರ್ಣಕುಂಭ ಹೊತ್ತ ನೂರಾರು ಮಹಿಳೆಯರು ಛದ್ಮವೇಷ ಧಾರಿಗಳು, ಕೇಸರಿ ಶಾಲು ಧರಿಸಿದ ಸಹಸ್ರಾರು ಹಿಂದು ಬಾಂಧವರು ಅಲಂಕೃತ ಪುಷ್ಪ ವಾಹನದಲ್ಲಿ ಭಾರತಾಂಬೆಯ ಭಾವಚಿತ್ರವನ್ನಿಟ್ಟು ಮುಖ್ಯ ರಸ್ತೆಯಲ್ಲಿ ಸಂಚರಿಸಿದರು. ದೇಶಿ ಗೋವುಗಳನ್ನು ರಕ್ಷಿಸಿ, ಅವುಗಳ ಸಂತತಿ ಹೆಚ್ಚಿಸುವ ನಿಟ್ಟಿನಲ್ಲಿ ಎಲ್ಲರೂ ಬದ್ಧರಾಗಬೇಕು ಎಂಬ ತಾರ್ಕಿಕತೆಯ ಉದ್ದೇಶದಿಂದ ವಿಶೇಷವಾಗಿ ಆಕಳು ಮತ್ತು ಕರುವಿಗೆ ಪೂಜೆ ಸಲ್ಲಿಸಲಾಯಿತು. ನಂತರ ಭಾರತಾಂಬೆಯ ಭಾವಚಿತ್ರಕ್ಕೆ ಹೂ ಹಾಕಿ ಪೂಜೆ ಸಲ್ಲಿಸಿ ವೇದಿಕೆ ಮೇಲೇರಿದ ಗಣ್ಯರು ದೀಪ ಬೆಳಗಿಸಿ ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸಂಕಲಾಪುರ ಮಠದ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, ಇಂದಿನ ಯುವ ಪೀಳಿಗೆ ನಮ್ಮ ಸಂಪ್ರದಾಯಗಳಲ್ಲಿ ತೋರಬೇಕಾದ ಆಶಕ್ತಿಯನ್ನು ಹೆಚ್ಚಾಗಿ ಮೊಬೈಲ್, ಸಾಮಾಜಿಕ ಜಾಲತಾಣದಲ್ಲಿ ತೋರುತ್ತಿದ್ದಾರೆ. ಅವುಗಳನ್ನು ಬದಿಗಿಟ್ಟು ಗುರು ಹಿರಿಯರಿಗೆ, ರೈತ, ಯೋಧರಿಗೆ ಗೌರವ ತೋರುತ್ತ ನಮ್ಮ ಸಂಸ್ಕೃತಿಯನ್ನು ಬೆಳೆಸುವ ನಿಟ್ಟಿನಲ್ಲಿ ಮುಂದಾಗಬೇಕಿದೆ ಎಂದರು.

ಐನಳ್ಳಿ ಹಿರೇಮಠದ ಸ್ವಾಮೀಜಿ ಪ್ರಶಾಂತ್ ದೇವರು, ಸಮಿತಿಯ ಅಧ್ಯಕ್ಷ ಮಂಜುನಾಥ ಶೆಟ್ಟಿ, ರೇಣುಕುಮಾರ್, ಶಾಸಕರಾದ ಹೆಚ್.ಕೆ. ಸುರೇಶ್, ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಬಿ. ಶಿವರಾಜ್, ಮುಖಂಡ ರಘು ಹಾಗೂ ಇತರರಿದ್ದರು.

## ಚಾಪ್ಟರ್ 1, ಇದೇ ಜನವರಿ 24 ರಂದು ಸಂಜೆ 7 ಗಂಟೆಗೆ ಜೀ ಕನ್ನಡದಲ್ಲಿ

# ರಿಷಬ್ ಶೆಟ್ಟಿಯ ಅದ್ಬುತ ನಟನೆಯ ಕಾಂತಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಕನ್ನಡ ಕಿರುತೆರೆಯ ಮನರಂಜನೆಯ ಮಹಾರಾಜ ಎಂದೇ ಖ್ಯಾತಿ ಪಡೆದಿರುವ ಜೀ ಕನ್ನಡ ವಾಹಿನಿಯು ಬರೀ ಧಾರಾವಾಹಿಗಳಿಂದ ಮಾತ್ರವಲ್ಲದೇ, ರಿಯಾಲಿಟಿ ಶೋಗಳು, ವರ್ಲ್ಡ್ ಟೆಲಿವಿಷನ್ ಪ್ರೀಮಿಯರ್ ಗಳಿಂದ ಪ್ರೇಕ್ಷಕರ ಮನಗೆದ್ದು ನಂ.1 ಪಟ್ಟದಲ್ಲಿದೆ. ಅಷ್ಟೇ ಅಲ್ಲದೇ ಈಗ ಜೀ ಕನ್ನಡ ವಾಹಿನಿಯು ಪ್ರೇಕ್ಷಕರಿಗೆ ಮತ್ತೊಂದು ಗುಡ್ ನ್ಯೂಸ್ ಕೊಡಲು ಮುಂದಾಗಿದೆ. ಬಾಕ್ಸ್ ಆಫೀಸ್ ನಲ್ಲಿ ಅತೀ ಹೆಚ್ಚು ಸಕ್ಸ ಸ್ ಪಡೆದ ಕಾಂತಾರ: ಚಾಪ್ಟರ್ 1 ಇದೇ ಜನವರಿ 24 ರಂದು ಸಂಜೆ 7 ಗಂಟೆಗೆ ಜೀ ಕನ್ನಡದಲ್ಲಿ ಪ್ರಸಾರ ಆಗಲಿದೆ. ಕಾಂತಾರ: ಚಾಪ್ಟರ್ 1 ಕಥೆಯು 4ನೇ ಶತಮಾನದ ಕದಂಬ ರಾಜವಂಶದ ಕಾಲದ ಒಂದು ಇತಿಹಾಸ ಕಥೆಯಾಗಿದ್ದು ಕಾಂತಾರ ಎಂಬ ಪ್ರದೇಶದ ನಾಯಕ ಬೇರ್ಮೆ ಮತ್ತು ಬಾಂಗ್ರಾ, ರಾಜ ಮನೆತನದ ನಡುವಿನ ಸಂಘರ್ಷವನ್ನು ತೋರಿಸುತ್ತದೆ. ಅಷ್ಟೇ ಅಲ್ಲದೇ ಕಾಂತಾರ ಎನ್ನುವ ಅದ್ಬುತ ಅರಣ್ಯಭೂಮಿಯ ಹುಟ್ಟಿನ ಕಥೆಯನ್ನು ಹೇಳುತ್ತದೆ. ಈ ನೆಲವನ್ನು ರೂಪಿಸಿದ ಆಳವಾದ ಸಂಪ್ರದಾಯಗಳು, ನಂಬಿಕೆ ಮತ್ತು ಜನಪದ ಕಥೆಗಳನ್ನೂ ಚಿತ್ರದಲ್ಲಿ ತೋರಿಸಲಾಗಿದೆ. ಸಾಂಸ್ಕೃತಿಕ, ಭಾವನಾತ್ಮಕ, ಜಾನಪದ ಅಂಶಗಳಿಂದ ಪ್ರೇಕ್ಷಕರ ಮನಗೆದ್ದ ಕಾಂತಾರ:ಚಾಪ್ಟರ್ 1, ಭಾರತ ಚಿತ್ರರಂಗದಲ್ಲಿ ಒಂದು ಮೈಲುಗಲ್ಲನ್ನು ರೂಪಿಸಿದೆ. ಈ ಚಿತ್ರದಲ್ಲಿರುವ ಅದ್ಬುತ ತಾರಾಬಳಗ ಈ ಚಿತ್ರದ ಯಶಸ್ಸಿ ಗೆ ಮತ್ತೊಂದು ಕಾರಣ. ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಈ ಚಿತ್ರದಲ್ಲಿ ಬೇರ್ಮೆ ಮತ್ತು ಮಾಯಕಾರ ಎಂಬ ದ್ವಿಪಾತ್ರದಲ್ಲಿ ನಟಿಸಿದ್ದಾರೆ. ರುಕ್ಮಿಣಿ ವಸಂತ್ ಅವರು ಕನಕಾವತಿ ಎಂಬ ಯುವರಾಣಿ ಪಾತ್ರವನ್ನು ನಿರ್ವಹಿಸಿದರೆ, ಮಲಯಾಳಂ ನ ಸೂಪರ್ ಸ್ಟಾರ್ ಜಯರಾಮ್ ಅವರು ರಾಜ ರಾಜಶೇಖರ, ಕನಕಾವತಿ ಮತ್ತು ಕುಲಶೇಖರ ಅವರ ಅಪ್ಪನ ಪಾತ್ರದಲ್ಲಿ ನಟಿಸಿದ್ದಾರೆ.

## ರಸ್ತೆ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲೂಕಿನ ಹಾನುಬಾಳು ಹೋಬಳಿಯ ವಿವಿಧ ಭಾಗಗಳಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಬುಧವಾರ ಭೂಮಿಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಿಗೆ ಉತ್ತಮ ಸಂಪರ್ಕ ಕಲ್ಪಿಸುವ ಉದ್ದೇಶದಿಂದ, ಸುಗಮ ಸಂಚಾರ ಹಾಗೂ ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ರಸ್ತೆಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

ಹಾನುಬಾಳು ಮುಖ್ಯ ರಸ್ತೆಯಿಂದ ಕಾಲಭೈರವೇಶ್ವರ ದೇವಸ್ಥಾನಕ್ಕೆ ತೆರಳುವ ರಸ್ತೆಯನ್ನು 15 ಲಕ್ಷ ರೂ. ವೆಚ್ಚದಲ್ಲಿ ಮಕ್ಕಿಹಳ್ಳಿ ಗ್ರಾಮದ ರಸ್ತೆಯನ್ನು 10 ಲಕ್ಷ ರೂ. ವೆಚ್ಚದಲ್ಲಿ ಹಾಗೂ ಚಿಮ್ಮಿಕೂಲ್ ರಸ್ತೆಯಿಂದ ಕ್ಯಾಮನಹಳ್ಳಿ ಸಂಪರ್ಕಿಸುವ ರಸ್ತೆಯನ್ನು 25 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತದೆ ಎಂದು ತಿಳಿಸಿದರು.

ಹಾನುಬಾಳು ಹೋಬಳಿ ವ್ಯಾಪ್ತಿಯಲ್ಲಿ ಇನ್ನೂ ಹಲವು ರಸ್ತೆಗಳು ಹಾಳಾಗಿದ್ದು, ಕೆಲವು ರಸ್ತೆಗಳ ನಿರ್ಮಾಣಕ್ಕೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನು ಕೆಲವು ರಸ್ತೆಗಳಿಗೆ ಟೆಂಡರ್ ಪ್ರಕ್ರಿಯೆ ನಡೆಯುತ್ತಿದ್ದು, ಕೆಲವೇ ದಿನಗಳಲ್ಲಿ ಕಾಮಗಾರಿ ಪ್ರಾರಂಭವಾಗಲಿದೆ ಎಂದರು.

ಹಾನುಬಾಳು ಗ್ರಾಪಂ ಅಧ್ಯಕ್ಷ ಸಂತೋಷ್, ಕ್ಯಾಮನಹಳ್ಳಿ ಗ್ರಾಪಂ ಅಧ್ಯಕ್ಷ ಮಲ್ಲೇಶ್, ಗ್ರಾಮ ಸದಸ್ಯ ಭವ್ಯ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಕೆ.ಸಂದೀಪ್, ಬಿಜೆಪಿ ಹಾನುಬಾಳು ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಆಶೀರ್ವಾದ, ಶಕ್ತಿ ಕೇಂದ್ರದ ಪ್ರಮುಖರಾದ ಆಕಾಶ್, ನಾಗೇಶ್, ಮಲ್ಲೇಶ್, ಮಾಜಿ ತಾಲ್ಲೂಕು ಪಂಚಾಯಿತಿ ಅಧ್ಯಕ್ಷ ಎಂ.ಪಿ. ರಂಗನಾಥ್, ಗ್ರಾಪಂ ಸದಸ್ಯರಾದ ಮೋಹನ್ ಆಚ್ಚರಡಿ, ಸುರೇಶ್, ಯೋಗರಾಜ್, ಕುಮಾರ್, ಬಿಜೆಪಿ ಮುಖಂಡರಾದ ಕ್ಯಾಮನಹಳ್ಳಿ ರಾಜ್ ಕುಮಾರ್, ಪಿಡಿಓ ಹರೀಶ್ ಮತ್ತಿತರರಿದ್ದರು.

# ಬೆಳಗುಂಬದಲ್ಲಿ ಶಿಲಾಯುಗ ನಿಲುವುಗಲ್ಲು ಪತ್ತೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ತಾಲೂಕಿನ ಬೆಳಗುಂಬ ಗ್ರಾಮದಲ್ಲಿ ಪ್ರಾಚೀನ ಕಾಲ ಕುರುಹುಗಳಿದ್ದು, ಕ್ಷೇತ್ರ ಕಾರ್ಯ ಕೈಗೊಂಡಾಗ ಶಿಲಾಯುಗ ಕಾಲಕ್ಕೆ ಸೇರಿದ ನಿಲುವುಗಲ್ಲು ಪತ್ತೆಯಾಗಿದೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕ, ಇತಿಹಾಸ ತಜ್ಞ ಡಾ.ಹರೀಶ್ ತಿಳಿಸಿದರು.

ಈ ಗ್ರಾಮದಲ್ಲಿ ಹೊಯ್ಸಳ ವಿಷ್ಣುವರ್ಧನ ಹಾಗೂ ಎರಡನೇ ವೀರಬಲ್ಲಾಳನ ಕಾಲದಲ್ಲಿ ಕೆತ್ತಿಸಿದ 12ನೇ ಶತಮಾನದ ಮೂರು ಶಾಸನಗಳಿದ್ದು ಸ್ಥಳೀಯ ನಾಡ ಪ್ರಭುಗಳಿಂದ ಮೂರು ಶಿವಾಲಯಗಳು, ಕೆರೆ, ಬಾವಿಗಳು, ಮಂಟಪಗಳನ್ನು ಆ ಕಾಲದಲ್ಲೇ ನಿರ್ಮಿಸಲಾಗಿದೆ. ಇಲ್ಲಿನ ವೀರಭದ್ರನ ದೇವಾಲಯದ ಗರುಡ ಗಂಬದ ಮೇಲೆ ಸುಮಾರು 16ನೇ ಶತಮಾನದ ಮತ್ತೊಂದು ಶಾಸನವಿದ್ದು, ಶಾಸನಗಳಲ್ಲಿ ಈ ಗ್ರಾಮವನ್ನು ಬೆಳ್ಳಿಗುಂಬ ಎಂದು ಕರೆಯಲಾಗಿದ್ದು, ಕೈಲಾಸಕ್ಕೂ ಮಿಗಿಲೆಂದು ವರ್ಣಿಸಲಾಗಿದೆ ಎಂದು ವಿವರಿಸಿದರು.

ಬಿ.ಎಲ್.ರೈಸ್ ದಾಖಲಿಸಿರುವ ಈ ಶಾಸನಗಳು ನಾಪತ್ತೆಯಾಗಿವೆ. ಈ ಗ್ರಾಮದ ಕೆರೆಯ ಪಕ್ಕದಲ್ಲಿ 9 ಅಡಿ ಎತ್ತರವಿರುವ 4 ಅಡಿ ಅಗಲವಾಗಿರುವ 2 ಅಡಿ ದಪ್ಪನಾದ ಬೃಹತ್ ನಿಲುವುಗಲ್ಲು ಪತ್ತೆಯಾಗಿವೆ. ಈ ನಿಲುವುಗಲ್ಲು ಪೂರ್ವ ಹಾಗೂ ಪಶ್ಚಿಮಾಭಿಮುಖವಾಗಿದೆ. ಈ ನಿಲುವುಗಲ್ಲಿನ ಪಕ್ಕದಲ್ಲಿಯೇ 6 ಅಡಿ ಅಗಲವಾದ ಮತ್ತು 6.3 ಅಡಿ ಉದ್ದವಾಗಿರುವ 2 ಅಡಿ ದಪ್ಪನಾದ ಒಂದು ದೈತ್ಯ ಆಸುಗಲ್ಲಿದೆ. ಇದು ಭೂಮಿಯಲ್ಲಿ ಮುಚ್ಚು ಹೋಗಿರುವಂತೆ ಕಾಣುತ್ತಿದ್ದು, ಉತ್ಕನನ ಮಾಡಿದರೆ ಹೆಚ್ಚಿನ ಮಾಹಿತಿ ಲಭ್ಯವಾಗುತ್ತದೆ. ಈ ರೀತಿಯ ನಿಲುವುಗಲ್ಲುಗಳು ಅರಸೀಕೆರೆ ತಾಲ್ಲೂಕಿನ ಬಾಣಾವರ ಹೋಬಳಿಯಲ್ಲಿ ಹೆಚ್ಚು ಕಾಣಸಿಗುತ್ತವೆ. ಇವು ಮೂರು ಸಾವಿರ ವರ್ಷಗಳಷ್ಟು ಪುರಾತನವಾದ (ಮೆಗಾಲಿತಿಕ್) ಬೃಹತ್ ಶಿಲಾಯುಗದ ಸಮಾಧಿ ಸ್ಥಳಗಳಾಗಿವೆ ಎಂದು ತಿಳಿಸಿದರು.

ಬೆಳಗುಂಬ ಗ್ರಾಮದ ಪೂರ್ವ ದಿಕ್ಕಿನಲ್ಲಿ ಸಿದ್ದೇಶ್ವರ ಬೆಟ್ಟವಿದ್ದು ಆ ಭಾಗದಿಂದ ಸಣ್ಣ ನೀರಿನ ಸೆಲೆ ಹರಿದುಬರುತ್ತದೆ. ಈ ತೊರೆಗೆ ಅಡ್ಡಲಾಗಿ ಹೊಯ್ಸಳರ ಕಾಲದಲ್ಲಿ ಕೆರೆಯೊಂದನ್ನು ನಿರ್ಮಿಸಲಾಗಿದೆ. ಗವಿ ಸಿದ್ದೇಶ್ವರ ಬೆಟ್ಟದ ಭಾಗದಿಂದ ಹರಿದು ಬರುವ ಪುಟ್ಟ ತೊರೆ ಸದಾ ನೀರಿನಿಂದ ಕೂಡಿದ ಸ್ಥಳವಾಗಿದೆ. ಈ ತೊರೆಯನ್ನು ಅಜ್ಜನಹಳ್ಳಿ ಭಾಗದಲ್ಲಿ ರಾಮೇಶ್ವರ ವಜ್ರ ಎಂದು ಕರೆಯುತ್ತಾರೆ. ಸದಾ ನೀರಿರುವುದರಿಂದ ಜನರ ಮಾನಸದಲ್ಲಿ ಪುಣ್ಯ ಕ್ಷೇತ್ರವಾಗಿದೆ. ಈ ತೊರೆಯು ಶಿಲಾಯುಗದ ಜನರ ಬಾಯಾರಿಕೆ ನೀಗಿಸುತ್ತಿತ್ತು ಎಂಬ ಕುರುಹು ಇದ್ದು, ಬೆಳಗುಂಬ ಸಮೀಪದ ಗವಿಸಿದ್ದೇಶ್ವರ ಬೆಟ್ಟದ ಕಲ್ಲಾಸರೆಗಳು ಶಿಲಾಯುಗದ ಜನರ ವಾಸದ ನೆಲೆಯಾಗಿ ಆಶ್ರಯವಾಗಿದ್ದವು ಎಂದರು.

ಈ ಗ್ರಾಮದ ಪಶ್ಚಿಮ ಭಾಗದಲ್ಲಿ ಮತ್ತೆ ಕೆಲವು ನಿಲುವುಗಲ್ಲುಗಳಿದ್ದು ಅವುಗಳನ್ನು ರೈತರು ಅರಿವಿಲ್ಲದೆ ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾಗುತ್ತವೆ ಎಂಬ ಕಾರಣಕ್ಕೆ ತೆರವುಗೊಳಿಸಿದರು ಎಂದು ಸ್ಥಳೀಯರು ಹೇಳುತ್ತಿದ್ದಾರೆ. ಒಟ್ಟಿನಲ್ಲಿ ಬೆಳಗುಂಬ ಗ್ರಾಮ ಮತ್ತು ಸುಮುತ್ತಲಿನ ಸ್ಥಳಗಳಲ್ಲಿ ಶಿಲಾಯುಗದ ಕುರುಹುಗಳಿದ್ದು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ, ಇತಿಹಾಸ ತಜ್ಞರು ಮತ್ತು ಸಂಶೋಧಕರಿಗೆ ಅಧ್ಯಯನ ಮಾಡಲು ಸವಾಲಿನ ಸ್ಥಳವಾಗಿದೆ ಎಂದರು.

### ಆದಿ ಮಾನವರ ವಾಸ ಸ್ಥಳ

ಕಲ್ಲಾಸರೆಗಳು ಹಾಗೂ ವರ್ಷಪೂರ್ತಿ ದೊರೆಯುವ ನೀರಿನ ತಾಣಗಳು ಇಲ್ಲಿರುವುದರಿಂದ ಈ ಪ್ರದೇಶ ಆದಿಮಾನವರಿಗೆ ವಾಸ ಮಾಡಲು ಯೋಗ್ಯವಾಗಿತ್ತು ಎಂದು ಹೇಳಬಹುದಾಗಿದೆ. ಗವಿ ಸಿದ್ದೇಶ್ವರ ಬೆಟ್ಟದ ಮೇಲೆ ವಿವಿಧ ಆಕೃತಿಯ ಶಿಲಾಯುಗದ ಜನರು ಬಳಸಿದ ಕೆಲವು ಕಲ್ಲಿನ ಆಯುಧಗಳನ್ನ ಕಾಣಬಹುದು. ಬೆಳಗುಂಬ ಗ್ರಾಮದ ಸುತ್ತಮುತ್ತಲಿರುವ ತಳಲುತೊರೆ, ಕೆಲ್ಲಂಗೆರೆ, ಆದಿಹಳ್ಳಿ ಗ್ರಾಮಗಳಲ್ಲಿಯೂ ಬೃಹತ್ ಶಿಲಾಯುಗ ಕಾಲದ ನಿಲುವುಗಲ್ಲುಗಳು ಪತ್ತೆಯಾಗಿದ್ದು, ಬೆಳಗುಂಬ ಗ್ರಾಮವು 3 ಸಾವಿರ ವರ್ಷಗಳಷ್ಟು ಪುರಾತನವಾದ ಕಾಲದಿಂದಲೂ ಜನವಸತಿಯ ಕೇಂದ್ರವಾಗಿತ್ತು ಎಂಬುದನ್ನು ಸ್ಪಷ್ಟ ಪಡಿಸಬಹುದಾಗಿದೆ ಎಂದು ಮಾಹಿತಿ ನೀಡಿದರು.

# ಕಲ್ಲೋಡೆಬೋರೆ ಕಾವಲಿನಲ್ಲಿ ಗಣಿಗಾರಿಕೆ ವಿರೋಧಿಸಿ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹೊಳೆನರಸೀಪುರ ತಾಲೂಕಿನ ಹಳ್ಳಿ ಮೈಸೂರು ಹೋಬಳಿ ಕಲ್ಲೋಡೆಬೋರೆ ಕಾವಲು ಸರ್ಕಾರಿ ಜಾಗದಲ್ಲಿ ಕಾನೂನು ಉಲ್ಲಂಘಿಸಿ ನಾಲ್ವರಿಗೆ ಕಲ್ಲು ಗಣಿಗಾರಿಕೆಗೆ ಪರವಾನಗಿ ನೀಡಿರುವುದನ್ನು ಖಂಡಿಸಿ ಗ್ರಾಮಸ್ಥರು ಜಿಲ್ಲಾ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದರು.

ನಗರ ಹೊರವಲಯದ ಸತ್ಯಮಂಗಲ ಬಡಾವಣೆಯಲ್ಲಿರುವ ಜಿಲ್ಲಾ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಕಚೇರಿಗೆ ಆಗಮಿಸಿದ ಗ್ರಾಮಸ್ಥರು, ಅಧಿಕಾರಿಗಳು ಹಣದ ಪ್ರಭಾವಕ್ಕೆ ಒಳಗಾಗಿ ಪರವಾನಗಿಗಳನ್ನು ನೀಡುತ್ತಿದ್ದಾರೆ. ಇದರಿಂದ ಪರಿಸರ ಹಾನಿ ಹೆಚ್ಚಾಗಿದ್ದು, ಜನರಲ್ಲಿ ವಿವಿಧ ರೋಗಗಳು ಹರಡುತ್ತಿವೆ. ತಕ್ಷಣವೇ ಈ ಪರವಾನಗಿಗಳನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

ಕಲ್ಲೋಡೆಬೋರೆ ಕಾವಲಿನಲ್ಲಿ ಸುಮಾರು 657 ಎಕರೆ ಸರ್ಕಾರಿ ಜಾಗವಿದ್ದು, ಕೆಲವು ರೈತರು ವರ್ಷಗಳಿಂದ ಸಾಗುವಳಿ ಮಾಡಿಕೊಂಡು ಬಂದಿದ್ದಾರೆ. ಆದರೆ ಕಂದಾಯ ಇಲಾಖೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಯಾವುದೇ ಸ್ಪಷ್ಟ ದಾಖಲೆಗಳಿಲ್ಲದೆ ನಾಲ್ವರಿಗೆ ಗಣಿಗಾರಿಕೆ ಪರವಾನಗಿ ನೀಡಿರುವುದು ಅನುಮಾನಾಸ್ಪದವಾಗಿದೆ. ಸರ್ಕಾರಿ ಜಾಗದಲ್ಲಿ ಯಾವ ಆಧಾರದ ಮೇಲೆ ಅನುಮತಿ ನೀಡಲಾಗಿದೆ ಎಂದು ಗ್ರಾಮಸ್ಥರು ಪ್ರಶ್ನಿಸಿದರು.


2016ರಿಂದಲೇ ನಾಲ್ವರಿಗೆ ಗಣಿಗಾರಿಕೆ ಅನುಮತಿ ನೀಡಲಾಗಿದ್ದು, ಅವರ ವಿರುದ್ಧ ಪ್ರಶ್ನೆ ಎತ್ತಿದ ಗ್ರಾಮಸ್ಥರ ಮೇಲೆ ಗಣಿಗಾರಿಕೆ ನಡೆಸುವವರು ರೌಡಿಗಳಂತೆ ವರ್ತಿಸಿ ದೌರ್ಜನ್ಯ ಎಸಗುತ್ತಿದ್ದಾರೆ ಎಂಬ ಆರೋಪವೂ ಕೇಳಿಬಂತು. ಈ ಕುರಿತು ಅಧಿಕಾರಿಗಳನ್ನು ಪ್ರಶ್ನಿಸಿದರೆ ಅವರು ಉಡಾಫೆ ಧೋರಣೆ ತೋರುತ್ತಿದ್ದಾರೆ. ಇದಲ್ಲದೆ, ಈ ಪ್ರದೇಶದಲ್ಲಿ ರಂಗೇನಹಳ್ಳಿ ಹಾಗೂ ಗುಡ್ಡೆನಹಳ್ಳಿ ಏತ ನೀರಾವರಿ ಯೋಜನೆಗಳು ಕಾರ್ಯನಿರ್ವಹಿಸುತ್ತಿದ್ದರೂ, ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ. ಇದರಿಂದ ಕೃಷಿ, ಕುಡಿಯುವ ನೀರು ಹಾಗೂ ಜನಜೀವನದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

ಕಂದಾಯ ಹಾಗೂ ಗಣಿ ಇಲಾಖೆ ಅಧಿಕಾರಿಗಳು ರೈತರಿಗೆ ಅಗತ್ಯ ದಾಖಲೆಗಳನ್ನು ಸರಿಯಾಗಿ ನೀಡದೆ, ಹಣ ಉಳ್ಳವರಿಗೆ ಮಾತ್ರ ರಾತ್ರೋರಾತ್ರಿ ಸರ್ವೆ ನಡೆಸಿ ಜಾಗ ಗುರುತು ಮಾಡಿಕೊಡುತ್ತಿದ್ದಾರೆ. ನಿಗದಿಪಡಿಸಿದ ಗಡಿಗಿಂತ ಹೆಚ್ಚು ವಿಸ್ತಾರದಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದ್ದರೂ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ. ಈ ಕುರಿತು ಹಲವಾರು ಬಾರಿ ಮನವಿ ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ, ಈ ಪರಿಸ್ಥಿತಿ ಮುಂದುವರಿದರೆ, ಆಮರಣಾಂತ ಉಪವಾಸ ಸತ್ಯಾಗ್ರಹ ಕೈಗೊಳ್ಳುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದರು.

ಹಳ್ಳಿ ಮೈಸೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್. ವಿರಾಜೇಗೌಡ, ಗ್ರಾಮಸ್ಥರಾದ ಮಂಜೇಗೌಡ, ಶ್ರೀನಿವಾಸ್, ಚಂದ್ರಶೇಖರ್, ಮಂಜೇಗೌಡ, ಪುಟ್ಟೇಗೌಡ ಸೇರಿ ಹಲವರು ಭಾಗವಹಿಸಿದ್ದರು.

# ಹಲವು ಸಿನಿಮಾಗಳ ಕಥಾ ಸಂಗಮ ಬಿಗ್ ಬಾಸ್ ಗಿಲ್ಲಿ ನಟ

**ಗೊರೂರು ಅನಂತರಾಜು**






ಗಿಲ್ಲಿನಟ ಗೆದ್ದಿದ್ದಾರೆ. ದಡದಪುರದ ಹಳ್ಳಿಯ ರೈತಾಪಿ ಕುಟುಂಬದ ಹುಡುಗ ಗೆಲುವಿನ ದಡ ಸೇರಿದ್ದಾರೆ. ಗಿಲ್ಲಿ ಗೆಲುವನ್ನು ಹಾಗೆ ಮೆಲುಕು ಹಾಕುತ್ತಾ ಹೋದೆ. ಹಲವು ಸಿನಿಮಾ ದೃಶ್ಯಗಳು ನೆನಪಾದವು. ಸಿನಿಮಾ ಕಥೆಗೂ ಬಾಸ್ ಬಾಸ್ ಶೋಗೂ ವ್ಯತ್ಯಾಸ ಇದೆ. ಅಂತೆಯೇ ಸಾಮ್ಯತೆಯೂ ಇದೆ. ಆದರೂ ಟಿವಿ ವೀಕ್ಷಕರಾದ ನಮಗೆ ಎರಡೂ ಒಂದೇ. ಸಿನಿಮಾದಲ್ಲಿ ಕಟ್ ಅಂಡ್ ಆಕ್ಷನ್ ಇರುತ್ತದೆ. ಇಲ್ಲಿ ಇರುವುದಿಲ್ಲ ಅಷ್ಟೇ. ನಮ್ಮ ಬಾಲ್ಯ ಜೀವನದಲ್ಲಿ ಟಿವಿ ಇರಲಿಲ್ಲ. ಆಗೆಲ್ಲಾ ನಮಗೆ ಮನರಂಜನೆ ನೀಡುತ್ತಿದ್ದದ್ದು ಸಿನಿಮಾಗಳೇ. ಗಿಲ್ಲಿಯಂತೆ ಸಿನಿಮಾ ನೋಡುವ ಚಟಕ್ಕೆ ಬಿದ್ದು ಓದಿನಲ್ಲಿ ಹಿಂದೆ ಬಿದ್ದ ಜಸ್ಟ್ ಪಾಸ್ ಸ್ಟೂಡೆಂಟ್ ಗಳು ನಾವು. ಸಿನಿಮಾವೊಂದರಲ್ಲಿ ಪ್ರೇಮಕತೆಯನ್ನು ಕೇಂದ್ರವಾಗಿಸಿ ಪೋಷಕ ಪಾತ್ರಗಳಿಂದ ಸಾಂಸರಿಕ ಕಥೆಯನ್ನು ಹೆಣೆಯಲಾಗುತ್ತ ಬಂದಿರುವುದನ್ನು ಕಾಣಬಹುದು. ಒಬ್ಬ ಹೀರೋನನ್ನು ಸೃಷ್ಟಿಸುವವಳು ಹೀರೋಯಿನ್. ಪ್ರೇಮ ಕಾವ್ಯದ ಹಾಡುಗಳ, ಮರ ಸುತ್ತವ ಪ್ರೇಮಿಗಳು ಇವರ ಹಾಡು ನೃತ್ಯದ ದೃಶ್ಯಗಳಿಗೆ ಹಿನ್ನಲೆಯಲ್ಲಿ ಪ್ರಕೃತಿ ಸಿರಿಯ ಸೊಬಗನ್ನು ಸೆರೆ ಹಿಡಿಯುವುದು ಸಿನಿಮಾದ ಒಂದು ಭಾಗ. ಇಲ್ಲಿ ನಾವು ಪುಟ್ಟಣ ಕಣಗಾಲ್‌ರನ್ನು ನೆನೆಯಲೇ ಬೇಕು. ಒಳ್ಳೆಯ ಹೀರೋ ಎನಿಸಿಕೊಳ್ಳಬೇಕಿದ್ದರೆ ಅವನೆದರು ವಿಲನ್ ಇಲ್ಲವಾದರೆ ಹೀರೋ ಜೀರೋ ಹೌದಷ್ಟೇ. ಇದಷ್ಟೇ ಆದರೆ ಸಿನಿಮಾ ರಂಜಿಸುವುದೇ..? ಇಲ್ಲಾ ಅಲ್ಲೊಬ್ಬ ಗಿಲ್ಲಿನಟನಂತಹ ಹಾಸ್ಯ ನಟ ಇರಬೇಕು. ಈ ಫಾರ್ಮುಲಾಗಳಲ್ಲೇ ಸಿನಿಮಾ ರೀಲು ಸುತ್ತಿಕೊಂಡು ಬಂದಿವೆ. ಇಂತಹ ಫಾರ್ಮುಲಾಗಳು ಬಿಗ್ ಬಾಸ್‌ನಲ್ಲಿ ಗೋಚರಿಸುತ್ತವೆ. ಇಲ್ಲಿಯ ಲವ್ ತರಹದ ಸ್ಟೋರಿ ರೆಡಿಮೇಡ್ ಆಗಿರಲಿಲ್ಲಾ. ಆದರೂ ಜನರಿಗೆ ಇಷ್ಟವಾಯ್ತು. ರಾಜಕುಮಾರ್ ಭಾರತಿ ಅಭಿನಯದ ಬಂಗಾರದ ಮನುಷ್ಯ ಭಲೆ ಜೋಡಿ ಸಿನಿಮಾ ನೋಡಿದಂತಾಯಿತು. ಸಂಪತ್ತಿಗೆ ಸವಾಲ್ ಸಿನಿಮಾದಲ್ಲಿ ಜಗಳಗಂಟಿ ಮಂಜುಳ ಮತ್ತು ರಾಜಕುಮಾರ್ ನಟನೆಯನ್ನು ನೆನಪಿಸಿದ್ದು ಗಿಲ್ಲಿನಟ ಅಶ್ವಿನಿಗೌಡರ ಜಗಳದ ಜುಗಲ್‌ಬಂದಿ. ಗಿಲ್ಲಿ ರಘು ಜೋಡಿ ಸಾಧು ಕೋಕಿಲ ದೊಡ್ಡಣ್ಣರ ಹಾಸ್ಯ ಜೋಡಿ ಎನಿಸಿತು. ಇನ್ನೂ ಮಕ್ಕಳಿಗೆ ಟಾಮ್ ಅಂಡ್ ಜೆರ್ರಿ ಕಾರ್ಟೂನ್ ಫಿಲಂ ನೋಡಿದಷ್ಟೇ ಖುಷಿ. ಗಿಲ್ಲಿ ಎಂಬ ಎರಡಕ್ಷರದ ಹೆಸರು ಮಕ್ಕಳ ನಾಲಿಗೆಯಲ್ಲಿ ನಲಿಯಿತು. ರಕ್ಷಿತಾಶೆಟ್ಟಿ ಗಿಲ್ಲಿ ನಡುವಿನ ಬಾಂಧವ್ಯ ಸಿನಿಮಾ ಕಥೆಯ ಅಣ್ಣ ತಂಗಿಯರಂತೆ ಗೋಚರಿಸಿತು. ರಾಜಕುಮಾರ್ ಅಭಿನಯದ ಮೇಯರ್ ಮುತ್ತಣ್ಣ ಸಿನಿಮಾದಲ್ಲಿ ಜಡೆಯಂತೆ ಕೂದಲು ಬಿಟ್ಟ ಮುತ್ತಣ್ಣನನ್ನು ಊರು ಬಿಟ್ಟು ಓಡಿಸಲಾಗುತ್ತಿದೆ. ಮುತ್ತಣ್ಣ ಬೆಂಗಳೂರಿಗೆ ಬಂದು ಮೇಯರ್ ಆದಂತೆ ಗಿಲ್ಲಿ ವಿನರ್ ಆಗಿದ್ದಾರೆ. ಅಲ್ಲಿ ಭಾರತಿ ಮುತ್ತಣ್ಣನ ಜಡೆ ಕಟ್ ಮಾಡಿದರೆ ಇಲ್ಲಿ ಕಾವ್ಯ ಶೈವ ಗಿಲ್ಲಿಗೆ ತಲೆ ಬಾಚಿಕೊಳ್ಳಲು ಬಾಚಣಿಕೆ ಪ್ರಸೆಂಟ್ ಮಾಡುತ್ತಾರೆ. ಆದರೂ ತಲೆ ಬಾಚಿಕೊಳ್ಳದೇ ಇದ್ದಾಗಲೇ ಗಿಲ್ಲಿ ಚೆನ್ನಾಗಿ ಕಾಣಿಸುತ್ತಿದ್ದರು ಎಂದಿತು ಒಂದು ಹುಡುಗಿ. ಆಗಿನ ವಿಲನ್ ನಾಗಪ್ಪನಂತೆ ವೀಕ್ಷಕರಿಗೆ ಗೋಚರಿಸಿದ್ದು ಧ್ರುವಂತ್. ಬಂಗಾರದ ಪಂಜರ ಸಿನಿಮಾದಲ್ಲಿ ಕುರಿ ಕಾಡು ಹಳ್ಳಿಯ ಬದುಕಿನೊಂದಿಗೆ ಹೊಂದಿಕೊಂಡ ಪಾತ್ರ ನಗರಕ್ಕೆ ಬಂದು ಎಷ್ಟೇ ಶ್ರೀಮಂತಿಕೆ ಐಷರಾಮಿ ಬದುಕ್ಕೂ ಇದ್ದರೂ ಹೊಂದಿಕೊಳ್ಳಲಾಗದೇ ಹಳ್ಳಿಯ ಬದುಕೇ ನನಗಿಷ್ಟ ಎಂದು ಒದ್ದಾಡುತ್ತದೆ. ಬಂಗಾರದ ಪಂಜರದಲ್ಲಿ ಕೂಡಿ ಹಾಕಿದಂತೆ ಬಿಗ್ ಬಾಸ್ ಮನೆಯಲ್ಲೂ ಕೂಡಿ ಹಾಕಿ ಒಂದಿಷ್ಟು ಟಾಸ್ಕ್ ನೀಡಿ ಉಳಿದಂತೆ ಅಲ್ಲಿ ನಡೆಯುವ ಗಲಾಟೆ ಗದ್ದಲ, ವಿರಸ ಸರಸ ಸಲ್ಲಾಪ ದೃಶ್ಯಗಳನ್ನೇ ಹೆಕ್ಕಿ ತೆಗೆದು ತೋರಿಸಲಾಗುತ್ತದೆ. ನಾವಾದರೂ ಅಷ್ಟೇ ಒಂದು ಒಳ್ಳೆಯ ಭಾಷಣ ಇದೆ ಕೇಳಲು ಬನ್ನಿ ಎಂದರೆ ಬರುವರೇ ? ಅದೇ ಎಲ್ಲಾದರೂ ಜಗಳ ನಡೆಯುತ್ತಿರಲಿ ಅದನ್ನು ನಿಂತು ನೋಡುವವರೇ ಹೆಚ್ಚು. ಜಗಳ ಮನುಷ್ಯನನ್ನು ಕುತೂಹಲದಿಂದ ಆಕರ್ಷಿಸುವುದು ಇದಕ್ಕೆ ಕಾರಣ. ಹಳ್ಳಿಯ ಅರಳಿಕಟ್ಟೆಯಲ್ಲಿ ಊರಿನ ಜಗಳ ವಿಷಯ ಚರ್ಚೆಗೆ ಬರುವುದು ಸರ್ವೆ ಸಾಮಾನ್ಯ. ಸೀರಿಯಸ್ ಆದ ಜಗಳದ ವಿಷಯವನ್ನು ವಿಡಂಬಿಸಿ ಹೇಳುವುದು ಒಂದು ಕಲೆ. ಅದು ಸಮಯಪ್ರಜ್ಞೆ. ತಮಾಷೆಯಾಗಿ ಮಾತನಾಡುವ ವ್ಯಕ್ತಿಯ ಸುತ್ತಾ ಜನ ಸೇರಿ ನಗುವುದು ಸಹಜವೇ. ಮನೆ ಜಗುಲಿಯಲ್ಲಿ ಹೆಂಗಸರು ಅವರಿವರ ಮನೆ ವಿಷಯ ಮಾತನಾಡಿಕೊಳ್ಳುತ್ತಾ ಅವರೆಕಾಯಿ ಸುಲಿಯುತ್ತಿರುವುದನ್ನು ನೋಡುವುದಿಲ್ಲವೇ? ಹಿಂದೆ ನಾನೊಂದು ಹನಿಗವನ ಬರೆದಿದ್ದೆ.

ನಮ್ಮೂರಿನ ಕೆಲ ಹೆಂಗಸರು
ಕಟು ವಿಮರ್ಶಕರು
ದಿನ ಚಾವಡಿಯಲ್ಲಿ
ನೆರೆಮನೆ ಕತೆಯನ್ನು
ಕಟುವಾಗಿ ವಿಮರ್ಶಿಸುತ್ತಿರುತ್ತಾರೆ

ಹಾಸ್ಯವಾಗಿ ಮಾತನಾಡುವುದು ಒಂದು ಕಲೆಗಾರಿಕೆ. ಇನ್ನೊಬ್ಬರ ನಡೆನುಡಿಯನ್ನು ಅನುಕರಿಸಿ ಅಣಕಿಸಿ ಮಿಮಿಕ್ರಿ ಮಾಡುವುದು ನೋಡಿದ್ದೇವೆ. ಅದು ಒಂದು ಕಲೆ. ಹಾಸ್ಯದ ಒಂದು ಪ್ರಕಾರ. ಇದು ಗಿಲ್ಲಿಯಲ್ಲಿದ್ದ ಒಂದು ಗುಣ ಲಕ್ಷಣ. ಅವರ ಮುಖವಾಡವಿಲ್ಲದ ಗ್ರಾಮೀಣ ಭಾಷೆ ನಡೆನುಡಿ ಗ್ರಾಮೀಣ ಜನರಿಗೆ ಇಷ್ಟವಾಯಿತು. ಪ್ರಾರಂಭದಲ್ಲಿ ನಾನು ಬಿಗ್ ಬಾಸ್ ನೋಡದೇ ಮಲಗಿಬಿಡುತ್ತದೆ. ಒಂಬತ್ತೂವರೆಗೆ ಮಲಗುವುದು ನನ್ನ ದಿನಚರಿ. ಐದಾರು ವಾರಗಳ ನಂತರ ನಿಧಾನವಾಗಿ ನೋಡುತ್ತಾ ಕಡೆಕಡೆಗೆ ಪೂರ್ತಿ ನೋಡಿಯೇ ಮಲಗುತ್ತಿದ್ದೆ. ಗಿಲ್ಲಿಯ ಸುತ್ತಲೇ ಕ್ಯಾಮರಗಳು ಗಿರಕಿ ಹೊಡೆಯಲು ಗಿಲ್ಲಿನಟನ ಹಾಸ್ಯಪ್ರಜ್ಞೆಗೆ ಆಕರ್ಷಿತನಾದೆ. ಸಾಮಾಜಿಕ ಜಾಲ ತಾಣಗಳಲ್ಲಿ ಗಿಲ್ಲಿ ಗೆಲ್ಲುವ ಮಾತು ಜೋರಾಗಿ ಅವರ ಹಿಂದಿನ ಕಾಮಿಡಿ ಶೋ ಶಾರ್ಟ್ ಫಿಲಂಗಳನ್ನು ನೋಡಿದೆ. ಎಲ್ಲೋ ಒಂದು ಕಡೆ ನರಸಿಂಹರಾಜು, ಮಿಸ್ಟರ್ ಬೀನ್, ಚಾರ್ಲಿ ಚಾಪ್ಲಿನ್, ಸಾಧು ಕೋಕಿಲರ ಹಾಸ್ಯಾಭಿನಯ ಸ್ಮರಿಸಿ ಅವೆಲ್ಲವೂ ಗಿಲ್ಲಿ ನಟನೆಯಲ್ಲಿ ಗೋಚರಿಸಿದವು. ಒಂದು ಕಾಲದಲ್ಲಿ ನಮ್ಮ ಹಳ್ಳಿಗೆ ತೊಗಲುಗೊಂಬೆ ಮೇಳದವರು ಬಂದು ಮನರಂಜನೆ ನೀಡುತ್ತಿದ್ದರು. ಊರಲ್ಲಿ ಜಾತ್ರೆ ಹಬ್ಬಕ್ಕೆ ಹುಡುಗರು ನಾಟಕ ಕಲಿಯುತ್ತಿದ್ದರು. ಕಲಿಯುವುದಕ್ಕೆ ಮೂರು ತಿಂಗಳು ಊರಲ್ಲಿ ಮನರಂಜನೆ. ನಂತರ ಸಿದ್ದತೆ ಪ್ರದರ್ಶನದ ಸಂತೋಷದ ಕ್ಷಣಗಳನ್ನು ವರ್ಷವಿಡಿ ನೆನಪಿಸಿಕೊಳ್ಳುತ್ತೇವೆ. ನಾಟಕ ಅಂದು ದೊಡ್ಡ ಮನರಂಜನೆ. ನಾಟಕ ರಂಗದಿಂದಲೇ ಬಂದ ಕಲಾವಿದರು ಸಿನಿಮಾ ರಂಗದಲ್ಲಿ ಪ್ರಸಿದ್ಧರಾದರು. ಆದರೆ ಸಿನಿಮಾವೇ ನಾಟಕಕ್ಕೊ ದೊಡ್ಡ ತೊಡಕಾಯಿತು. ಟಿವಿ ಮನೆಗೆ ಬಂತು. ಬಿಟ್ಟಿ ಸಿನಿಮಾ ಮನೆಯಲ್ಲೇ ನೋಡುವಾಗ ದುಡ್ಡು ಕೊಟ್ಟು ನೋಡಲು ಜನ ಥಿಯೇಟರ್‌ಗೆ ಬರುತ್ತಿಲ್ಲ. ನ್ಯೂಸ್ ಚಾನಲ್ ಗಳು ಮಹಿಳೆಯರಿಗೆ ಪ್ರಿಯವಾಗದೇ ಧಾರಾವಾಹಿಗೆ ಮೊರೆಹೋದರು. ಧಾರಾವಾಹಿ ಕಲಾವಿದರು ಬಿಗ್‌ಬಾಸ್‌ಗೆ ಬಂದರು. ಇವರಿಗೆ ಪ್ರತಿಸ್ಪರ್ಧಿಗಳಾಗಿ ಮಾತಿನ ಮಲ್ಲರು, ಸಾಮಾಜಿಕ ಜಾಲತಾಣದ ಜಾಣರು, ಗಾಯಕರು ಮಿಕ್ಸಿಂಗ್ ಆದರು. ಉಪ್ಪು, ಕಾರ, ಹುಳಿ, ಬೆಳ್ಳುಳ್ಳಿ ಬೆರೆತು ರುಚಿಯಾದ ಊಟ ಅಡಿಗೆ ಮನೆ ಬೆಳಕಿಗೆ ಬಂತು. ನಲ್ಲಿ ಮೂಳೆ ತಿಂದು ಗಿಲ್ಲಿ ಗೆದ್ದರು. ಜಾಣ ವಿದ್ಯಾರ್ಥಿಯಂತೆ ಯಾರ ತಂಟೆಗೂ ಹೋಗದೆ ಟಾಸ್ಕ್‌ನಲ್ಲಿ ಫಸ್ಟ್‌ಕ್ಲಾಸ್ ಬಂದರೂ ಧನುಷ್ ವೀಕ್ಷಕರ ಹೃದಯ ಗೆಲ್ಲಲು ವಿಫಲರಾದರು. ಗಿಲ್ಲಿ ಗೆಲುವಿಗೆ ಕಾವ್ಯ ಶೈವ, ಅಶ್ವಿನಿಗೌಡ, ರಘು, ರಕ್ಷಿತಾ ಶೆಟ್ಟ ಮತ್ತು ರಜತ್ ಅವರ ಪಾತ್ರ ಅದು ನೆಗಟಿವ್ ಆಗಿರಲಿ ಪಾಸಿಟಿವ್ ಆಗಿರಲಿ ಪರೋಕ್ಷವಾಗಿ ನೆರವಾಗಿದೆ. ಅದು ಒಂದು ಧಾರವಾಹಿಯಂತೆ, ಸಿನಿಮಾದಂತೆ ಜನರಿಗೆ ಮನರಂಜನೆ ನೀಡಿದೆ. ಮೊದಲೇ ಪರೀಕ್ಷೆಗೆ ಸಿದ್ದವಾಗಿ ಬಂದಿದ್ದ ಗಿಲ್ಲಿನಟ ಸಂದರ್ಭ ಸನ್ನಿವೇಶಗಳನ್ನು ತಮ್ಮ ಅನುಕೂಲಕ್ಕೆ ಸೂಕ್ತವಾಗಿ ಬಳಸಿಕೊಂಡು ಹಾಸ್ಯ ವಿಡಂಬನೆ ಮಾತಿನಿಂದಲೇ ಜನಮನ ಗೆದ್ದರು.

# ಇತಿಹಾಸದಲ್ಲಿ ಈ ದಿನ

## ಜನವರಿ-22

1905: ರಷ್ಯಾದ ಸೈಂಟ್ ಪೀಟರ್ಸ್‌ಬರ್ಗ್‌ನಲ್ಲಿ ನಡೆದ ಬ್ಲಡಿ ಸಂಡೇಟ (ರಕ್ತ ಭಾನುವಾರ) ಘಟನೆ. ಶಾಂತ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಜನರ ಮೇಲೆ ಸೇನೆಯ ಗುಂಡಿನ ದಾಳಿ, ಇದು ರಷ್ಯಾ ಕ್ರಾಂತಿಗೆ ಮುನ್ನುಡಿಯಾಯಿತು.

1924: ಬ್ರಿಟನ್‌ನ ಮೊದಲ ಕಾರ್ಮಿಕ ಪಕ್ಷದ ಸರ್ಕಾರವನ್ನು ರಾಮ್ಸೆ ಮ್ಯಾಕ್‌ಡೊನಾಲ್ಡ್ ನೇತೃತ್ವದಲ್ಲಿ ಸ್ಥಾಪಿಸಲಾಯಿತು.

1947: ಭಾರತದಲ್ಲಿ ಸಂವಿಧಾನ ರಚನಾ ಸಭೆ ರಾಷ್ಟ್ರಧ್ವಜವನ್ನು ಅಧಿಕೃತವಾಗಿ ಅಂಗೀಕರಿಸಿತು.

1963: ಫ್ರಾನ್ಸ್ ಮತ್ತು ಪಶ್ಚಿಮ ಜರ್ಮನಿ ನಡುವೆ ಎಲಿಸೀ ಒಪ್ಪಂದಕ್ಕೆ ಸಹಿ. ಯೂರೋಪಿನ ಏಕತೆಗೂ ಬಲ ನೀಡಿದ ಮಹತ್ವದ ಒಪ್ಪಂದ.

1992: ಅಜರ್ಬೈಜಾನ್ ಮತ್ತು ಆರ್ಮೇನಿಯಾ ನಡುವೆ ನಾಗೋರ್ನೊ-ಕಾರಬಾಖ್ ಸಂಘರ್ಷ ತೀವ್ರಗೊಂಡು ಹಲವಾರು ನಾಗರಿಕರು ಸಾವನ್ನಪ್ಪಿದರು.

### ಜನನ

1561: ಫ್ರಾನ್ಸಿಸ್ ಬೇಕನ್, ಇಂಗ್ಲಿಷ್ ತತ್ತ್ವಜ್ಞಾನಿ, ವಿಜ್ಞಾನ ಚಿಂತಕ ಮತ್ತು ರಾಜಕೀಯ ನಾಯಕ

1901: ಗೋಪಾಲ ಕೃಷ್ಣ ಗೋಖಲೆ, ಭಾರತೀಯ ಸ್ವಾತಂತ್ರ್ಯ ಹೋರಾಟಗಾರರ ಪೀಳಿಗೆಗೆ ಪ್ರೇರಕ ಚಿಂತಕ

### ನಿಧನ

1944: ಎಡ್ವರ್ಡ್ ಮುಂಚ್ ಪ್ರಸಿದ್ಧ ನಾರ್ವೇಜಿಯನ್ ಚಿತ್ರಕಾರ

2008: ಹೀತ್ ಲೆಡ್ಜರ್, ಆಸ್ಟ್ರೇಲಿಯನ್ ನಟ, ಹಾಲಿವುಡ್ ಜನಪ್ರಿಯ ಕಲಾವಿದ

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248